# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಇವರ ಕರ್ತವ್ಯಲೋಪದ ಬಗ್ಗೆ.

**ಓದಲಾಗಿದೆ:**
1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅಸಪ ಸಂಖ್ಯೆ : D.O.No.Compt/Uplok/BD/2472/2016/ARLO-2, ದಿನಾಂಕ: 24-04-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಡಿ-2472/2016/ಸನಿಕಾಸ-2, ದಿನಾಂಕ: 17-04-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 24-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರು ಸಲ್ಲಿಸಿರುವ ವರದಿಯಲ್ಲಿ ಶ್ರೀ ಹೆಚ್.ಆರ್. ವೆಂಕಟೇಶ್, ಚಿಕ್ಕಗೊಲ್ಲರಹಟ್ಟಿಯ ನಿವಾಸಿ, ಮಾಗಡಿ ಮುಖ್ಯರಸ್ತೆ, ಬೆಂಗಳೂರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ತುರುವೇಕೆರೆ ತಾಲ್ಲೂಕು ಹಡವನಹಳ್ಳಿ ಗ್ರಾಮಕ್ಕೆ ಇತ್ತೀಚಿಗೆ ಹೊಸ ಗ್ರಾಮ ಪಂಚಾಯತಿ ಮಂಜೂರಾಗಿದ್ದು, ಸರ್ಕಾರದಿಂದ ಅಧಿಕೃತ ಗೆಜೆಟ್ ಪ್ರಕಟವಾಗಿರುತ್ತದೆ. ಗ್ರಾಮ ಪಂಚಾಯತಿ ಕಛೇರಿಯನ್ನು ಕೇಂದ್ರ ಸ್ಥಾನದಲ್ಲಿ ತೆರೆಯುವ ಸಲುವಾಗಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ರವರು ಹಡವನಹಳ್ಳಿಯನ್ನು ಕೇಂದ್ರಸ್ಥಾನವನ್ನಾಗಿ ಮಾಡಲು ಹಡವನಹಳ್ಳಿ ಗ್ರಾಮದಲ್ಲಿ ಕಛೇರಿ ತೆರೆಯುವಂತೆ ಆದೇಶಿಸಿರುತ್ತಾರೆ. ಆದರೆ ಎದುರುದಾರರು ಕಾನೂನುಬಾಹಿರವಾಗಿ ಹಣದ ಆಮಿಷಕ್ಕೊಳಗಾಗಿ ಹಡವನಹಳ್ಳಿಯಿಂದ ವಿಸ್ತರಣೆಯಾಗಿರುವ ಜನತಾ ಕಾಲೋನಿಯಲ್ಲಿ ಕಚೇರಿ ತೆರೆದು ಕರ್ತವ್ಯಲೋಪವೆಸಗಿರುತ್ತಾರೆ. ಆದ್ದರಿಂದ ಎದುರುದಾರರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

ಎದುರುದಾರರಿಗೆ ತಮ್ಮ ಆಕ್ಷೇಪಣೆಯನ್ನು ಸಲ್ಲಿಸಲು ನೋಟಿಸು ನೀಡಿದ್ದು, ಆದರೆ ಸ್ವೀಕೃತಿ ಬಂದಿದ್ದು, ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿರುತ್ತದೆ.

ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಹಡವನಹಳ್ಳಿಯನ್ನು ಹೊಸ ಗ್ರಾಮ ಪಂಚಾಯತಿಯಾಗಿ ಘೋಷಿಸಿ ದಿ: 19-04-2015 ರ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಆದರೆ ಕೇಂದ್ರ ಕಛೇರಿಯನ್ನು ತೆರೆಯುವ ಸಲುವಾಗಿ ವಿವಾದ ಏರ್ಪಟ್ಟು, ಗ್ರಾಮಸ್ಥರು ಹಡವನಹಳ್ಳಿ ಗ್ರಾಮ ಕೇಂದ್ರಸ್ಥಾನವಿಟ್ಟುಕೊಂಡು ಕಛೇರಿ ತೆರೆಯುವಂತೆ ಪ್ರಾದೇಶಿಕ ಆಯುಕ್ತರಿಗೆ ದೂರ ಸಲ್ಲಿಸಿದ್ದು, ಅವರು ಅದನ್ನು ಪ್ರಕರಣ ಸಂ.ಕೆ.ಪಿ.ಆರ್.ಆರ್.ಪಿ/78/2014-15, ದಿ: 30-03-2015 ರಂದು ಹಡವನಹಳ್ಳಿಯನ್ನು ಕೇಂದ್ರ ಸ್ಥಾನವನ್ನಾಗಿ ಮಾಡಲು ಜಿಲ್ಲಾಧಿಕಾರಿಗಳಿಗೆ ಸೂಚಿಸಿ ಆದೇಶಿಸಿರುತ್ತಾರೆ.

ಇದೇ ವಿಷಯದ ಬಗ್ಗೆ ಗ್ರಾಮಸ್ಥರು ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 45464/2015 ಅಂತ ಪ್ರಕರಣ ದಾಖಲಿಸಿ ಅದರಲ್ಲಿ 3 ತಿಂಗಳೊಳಗಾಗಿ ಪ್ರಾದೇಶಿಕಾಯುಕ್ತರ ಆದೇಶದಂತೆ ಕಛೇರಿ ತೆರೆಯಲು ಆದೇಶ ನೀಡಿರುತ್ತಾರೆ. ಆದರೆ ಎದುರುದಾರರು ಈ ಎಲ್ಲಾ ಆದೇಶಗಳನ್ನು ಉಲ್ಲಂಘಿಸಿ ಹಡವನಹಳ್ಳಿ ಗ್ರಾಮದಿಂದ 2 ಕಿ.ಮೀ. ದೂರದಲ್ಲಿರುವ ಜನತಾ ಕಾಲೋನಿಯಲ್ಲಿ ಗ್ರಾಮ ಪಂಚಾಯತಿ ಕಛೇರಿ ಕಟ್ಟಡ ಕಟ್ಟಲು ಅನುಮತಿ ಪತ್ರ ನೀಡಿರುತ್ತಾರೆ. ಆದ್ದರಿಮದ ಎದುರುದಾರರು ಮೇಲಾಧಿಕಾರಿಗಳ ಹಾಗೂ ನ್ಯಾಯಾಲಯದ ಆದೇಶಗಳನ್ನು ಉಲ್ಲಂಘಿಸಿ ನಿಗದಿತ ಸ್ಥಳಕ್ಕಿಂತ ಬೇರೆ ಕಡೆ ಗ್ರಾಮ ಪಂಚಾಯತಿ ಕಛೇರಿ ತೆರೆಯಲು ಅನುಮತಿ ಪತ್ರ ನೀಡಿ ಕರ್ತವ್ಯಲೋಪವೆಸಗಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆದ್ದರಿಂದ, ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ರವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) (i) ಮತ್ತು (ii) ರ ಅಡಿಯಲ್ಲಿ ದುರ್ನಡತೆ/ ದುರ್ವತನೆ ಕಂಡು ಬಂದಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/387/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 08–05–2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 31 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀ ಎಂ.ಟಿ. ಮೂಡಲಗಿರಿಗೌಡ, ಕಾರ್ಯದರ್ಶಿ, ಹಡವನಹಳ್ಳಿ ಗ್ರಾಮ ಪಂಚಾಯತಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ
7) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.